ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

14

ಶಾಖೆ / ವಿಷಯ : DEPARTMENT / SUBJECT: ಶಾಸಕರ - ಆರೋಗ್ಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 10/7/2020

ಆನೇಕಲ್ ಶಾಸಕ ಶಿವಣ್ಣಗೂ ಸೋಂಕು

10

ಆನೇಕಲ್: ಆನೇಕಲ್ ಶಾಸಕ ಬಿ.ಶಿವಣ್ಣ ಅವರಿಗೂ ಕೊರೋನಾ ಸೋಂಕಿರುವುದು ದೃಢವಾಗಿದ್ದು, ಇಲ್ಲಿನ ನಾರಾಯಣ ಹೃದಯಾಲಯಕ್ಕೆ ದಾಖಲಾಗಿದ್ದಾರೆ. ಕಳೆದ 2 ದಿನಗಳ ಹಿಂದೆ ಜ್ವರ, ನೆಗಡಿ ಕಾಣಿಸಿಕೊಂಡ ಕಾರಣ ಶಿವಣ್ಣ ತಪಾಸಣೆಗೆ ಒಳಗಾಗಿದ್ದರು. ಗುರುವಾರ ವರದಿ ಬಂದಿದ್ದು, ಅವರಿಗೆ ಸೋಂಕಿರುವುದು ದೃಥವಾಗಿದೆ. ಲಾಕ್‌ಡೌನ್ ಹಾಗೂ ಕೊರೋನಾದಿಂದ ಜನರು ಸಂಕಷ್ಟಕ್ಕೀಡಾಗಿರುವ ಕಾರಣ ತಾಲೂಕಿನೆಲ್ಲೆಡೆ ಸಂಚರಿಸಿ, ಅವರ ಕಷ್ಟಗಳಿಗೆ ಸ್ಪಂದಿಸುತ್ತಿದ್ದರು. ಹೀಗೆ ಜನರ ಸಂಪರ್ಕದಲ್ಲಿದ್ದ ಕಾರಣ ಅವರಿಗೆ ಸೋಂಕು ಹರಡಿರಬಹುದು ಎಂದು ಶಂಕಿಸಲಾಗಿದೆ. 'ಸಾಮಾನ್ಯರಿಗೆ ಮಾತ್ರವಲ್ಲ ವೈದ್ಯರು, ಅಧಿಕಾರಿಗಳು, ಜನಪ್ರತಿನಿಧಿಗಳು ಸೇರಿದಂತೆ ಎಲ್ಲರಿಗೂ ಕೊರೋನಾ ಸೋಂಕು ಹಬ್ಬುತ್ತಿದ್ದು, ಇದೊಂದು ಸಹಜವಾದ ಪ್ರಕ್ರಿಯೆ ಎಂದು ಭಾವಿಸಿ ಧೈರ್ಯವಾಗಿ ಎದುರಿಸಿ' ಎಂದು ಶಾಸಕ ಶಿವಣ್ಣ ವಿಶ್ವಾಸದ ನುಡಿಗಳನ್ನು ಆಡಿದ್ದಾರೆ.